## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/120/ಗ್ರಾಪಂಸಿ/2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:06-09-2018

ಇವರಿಂದ:

ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯತಿ,
**ರಾಮನಗರ ಜಿಲ್ಲೆ.**

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಸಿಬ್ಬಂದಿಗಳ ನೇಮಕಾತಿ ಮತ್ತು ಅನುಮೋದನೆ ನೀಡಲು ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಸ್ಪಷ್ಟೀಕರಣ ನೀಡುವ ಬಗ್ಗೆ.

**ಉಲ್ಲೇಖ:**
1. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 81 ಸೇವನೆ 2017, ದಿನಾಂಕ:27-02-2018.
2. ಸರ್ಕಾರದ ಇದೇ ಸಮ ಸಂಖ್ಯೆಯ ಪತ್ರ ದಿನಾಂಕ:20-06-2018.
3. ಶ್ರೀ ಹೆಚ್.ಸಿ. ಮುನಿಲಿಂಗೇಗೌಡ, ಕರವಸೂಲಿಗಾರ ರವರು ಸರ್ಕಾರಕ್ಕೆ ಸಲ್ಲಿಸಿರುವ ಮನವಿ.

****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳ ಕಡೆಗೆ ಗಮನ ಸೆಳೆಯಲಾಗಿದೆ. ಉಲ್ಲೇಖ(2) ರ ಸರ್ಕಾರದ ಪತ್ರದಲ್ಲಿ ದಿನಾಂಕ:10-09-2014 ರ ಸರ್ಕಾರದ ಆದೇಶದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿ ನೇಮಕಾತಿ ಹಾಗೂ ಅನುಮೋದನೆಗೆ ಸಂಬಂಧಪಟ್ಟಂತೆ ಕರವಸೂಲಿಗಾರ, ಗುಮಾಸ್ತ / ಬೆರಳಚ್ಚುಗಾರ (ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಪಿಯುಸಿ ಹಾಗೂ ಗಣಕಯಂತ್ರ ಪರಿಣಿತಿಯನ್ನು ವಿದ್ಯಾರ್ಹತೆಯಾಗಿ ನಿಗದಿಪಡಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ದಿನಾಂಕ:27-02-2018 ರಂದು ಹೊರಡಿಸಿರುವ ಉಲ್ಲೇಖ(6) ರ ಸುತ್ತೋಲೆಯಲ್ಲಿ ಪಿ.ಯು.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳನ್ನು ನಿರ್ದಿಷ್ಟಪಡಿಸಿದ್ದು, ಕರವಸೂಲಿಗಾರ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳ ನೇಮಕಾತಿ ಹಾಗೂ ಅನುಮೋದನೆಗೆ ಅದನ್ನು ಪರಿಗಣಿಸುವಂತೆ ತಿಳಿಸಲಾಗಿತ್ತು.

ಶ್ರೀ ಹೆಚ್.ಸಿ.ಮುನಿಲಿಂಗೇಗೌಡ ಇವರು ಸರ್ಕಾರಕ್ಕೆ ಸಲ್ಲಿಸಿರುವ ಉಲ್ಲೇಖ(3) ರ ಮನವಿಯಲ್ಲಿ ತಾನು ಕನಕಪುರ ತಾಲ್ಲೂಕು ಹೂಕುಂದ ಗ್ರಾಮ ಪಂಚಾಯತಿಯಲ್ಲಿ ದಿನಾಂಕ:24-10-2017 ರಂದು ಕರ ವಸೂಲಿಗಾರರಾಗಿ ಸೇವೆಗೆ ಸೇರಿದ್ದು, ಉಲ್ಲೇಖ(1) ರ ಸುತ್ತೋಲೆಯಲ್ಲಿ ಜೆ.ಓ.ಸಿ. ವಿದ್ಯಾರ್ಹತೆಯು ಪಿ.ಯು.ಸಿ. ವಿದ್ಯಾರ್ಹತೆಗೆ ತತ್ಸಮಾನ ವಿದ್ಯಾರ್ಹತೆ ಎಂದು ಪರಿಗಣಿಸಲಾಗಿದ್ದು, ತಾನು ಸೇವೆಗೆ ಸೇರಿದ ತದನಂತರದಲ್ಲಿ ಈ ಸುತ್ತೋಲೆಯು ಬಂದಿರುವುದರಿಂದ ಈ ಸುತ್ತೋಲೆಯನ್ವಯ ಹಾಲಿ ಕರವಸೂಲಿಗಾರನಾಗಿರುವ ತನಗೆ ಸುತ್ತೋಲೆಯು ಪೂರ್ವಾನ್ವಯವಾಗುವಂತೆ ಪರಿಗಣಿಸಿ ತನ್ನ ನೇಮಕಾತಿ ದಿನಾಂಕದಿಂದಲೇ ಪೂರ್ವಾನ್ವಯವಾಗುವಂತೆ ಹಾಲಿ ಇರುವ ಕರವಸೂಲಿಗಾರ ಹುದ್ದೆಯ ರಿಕ್ತ ಸ್ಥಾನಕ್ಕೆ ನೇಮಕಾತಿ ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ಪೂರ್ವಾನುಮೋದನೆ ನೀಡಬೇಕೆಂದು ಕೋರಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿದ್ದು, ಮಾನ್ಯ ಉಚ್ಚನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:9335-9338/2012 (ಎಸ್.ಕೆ.ಎ.ಟಿ) ರಲ್ಲಿ ದಿನಾಂಕ:05-09-2012 ರಂದು ನೀಡಿರುವ ಆದೇಶದಲ್ಲಿ ಜೆ.ಓ.ಸಿ. ವಿದ್ಯಾರ್ಹತೆ ಪಿ.ಯು.ಸಿ ವಿದ್ಯಾರ್ಹತೆಗೆ ಸಮಾನವೆಂದು ಆದೇಶಿಸಿದೆ. ಈ ಬಗ್ಗೆ ಉಲ್ಲೇಖ(1) ರ ಸುತ್ತೋಲೆಯಲ್ಲಿ ಸಹ ಈ ಬಗ್ಗೆ ಸ್ಪಷ್ಟವಾಗಿ ತಿಳಿಸಲಾಗಿದೆ. ಆದುದರಿಂದ ಈ ಸುತ್ತೋಲೆಯು ಜಾರಿಗೆ ಬರುವ ಮುನ್ನ ಶ್ರೀ ಹೆಚ್.ಸಿ. ಮುನಿಲಿಂಗೇಗೌಡ, ಕರವಸೂಲಿಗಾರ ಇವರ ನೇಮಕಾತಿ ಹಾಗೂ ಅನುಮೋದನೆಗೆ ಜೆ.ಓ.ಸಿ. ವಿದ್ಯಾರ್ಹತೆಯನ್ನು ಪರಿಗಣಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

6/9/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

6/9

ಪ್ರತಿ ಮಾಹಿತಿ ಅಗತ್ಯ ಕ್ರಮಕ್ಕಾಗಿ:-

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.